ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನ್ಯಾಕ್/08/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಭವನ, ಶೇಷಾದ್ರಿ ರಸ್ತೆ,
ಬೆಂಗಳೂರು-1, ದಿನಾಂಕ: 18.08.2022.

## ಸುತ್ತೋಲೆ

ವಿಷಯ: ನ್ಯಾಕ್ ಪ್ರಕ್ರಿಯೆಗೆ ಒಳಪಟ್ಟ/ಒಳಪಡಲಿರುವ ಸ.ಪ್ರ.ದ.ಕಾಲೇಜುಗಳು ಐ.ಐ.ಕ್ಯೂ.ಎ., ಎಸ್.ಎಸ್.ಆರ್ ಮತ್ತು ಡಿ.ವಿ.ವಿ ಹಂತಕ್ಕೆ ತೆರಳುವ ಮುನ್ನ ಕಡ್ಡಾಯವಾಗಿ ನ್ಯಾಕ್ ವಿಶೇಷಾಧಿಕಾರಿಗಳೊಂದಿಗೆ ಪರಾಮರ್ಶನ ಸಭೆ ನಡೆಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ (ನ್ಯಾಕ್) ಈ ಸಂಸ್ಥೆಯ ಮೌಲ್ಯಮಾಪನಾ ಪ್ರಕ್ರಿಯೆ ಕಡ್ಡಾಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮೌಲ್ಯಮಾಪನ ಪ್ರಕ್ರಿಯೆಗೆ ಒಳಪಡುತ್ತಿವೆ. ನ್ಯಾಕ್ ಮೌಲ್ಯಮಾಪನದಲ್ಲಿ ಐಐಕ್ಯೂಎ., ಎಸ್.ಎಸ್.ಆರ್. ಹಾಗೂ ಡಿ.ವಿ.ವಿ. ಹಂತಗಳಿದ್ದು, ಕಾಲೇಜುಗಳು ಈ ಎಲ್ಲಾ ಹಂತಗಳಲ್ಲೂ ನ್ಯಾಕ್ ಪ್ರಕ್ರಿಯೆಯಲ್ಲಿ ಕೇಳಿರುವ ಪ್ರಶ್ನೆಗಳನ್ನು ಅರ್ಥ ಮಾಡಿಕೊಂಡು ಅದಕ್ಕೆ ಸೂಕ್ತವಾದ ಉತ್ತರಗಳನ್ನು, ಹಾಗೂ ದಾಖಲೆಗಳನ್ನು ಸೂಕ್ತವಾದ ಜಿಯೋಟ್ಯಾಗ್ ಫೋಟೋಗಳೊಂದಿಗೆ ನೀಡಿ, ಈ ಎಲ್ಲಾ ಹಂತಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕಾಗಿರುತ್ತದೆ.

ಈ ನಿಟ್ಟಿನಲ್ಲಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ನ್ಯಾಕ್ ವಿಶೇಷಾಧಿಕಾರಿಗಳು ನಡೆಸುವ ಪರಾಮರ್ಶನ ಸಭೆಯಲ್ಲಿ ಪಾಲ್ಗೊಂಡು, ಎಸ್.ಎಸ್.ಆರ್. ವರದಿಯಲ್ಲಿ ಕೇಳಿರುವ ಪ್ರಶ್ನೆಗಳಿಗೆ ಕೊಟ್ಟಿರುವ ಉತ್ತರಗಳನ್ನು ಹಾಗೂ ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸುವುದು ಹಾಗೂ ಡಿ.ವಿ.ವಿ. ಪ್ರಕ್ರಿಯೆಯಲ್ಲಿ ಕೇಳಿರುವ ಮಾಹಿತಿಗಳನ್ನು ಚರ್ಚಿಸುವುದು, ನಂತರ ಪರಾಮರ್ಶನ ಸಭೆಯಲ್ಲಿ ನೀಡಲಾದ ಸಲಹೆ-ಸೂಚನೆಗಳನ್ನು ಅಳವಡಿಸಿಕೊಂಡು, ನ್ಯಾಕ್ ವಿಶೇಷಾಧಿಕಾರಿಗಳ ಅನುಮೋದನೆ ಪಡೆದು, ದಾಖಲಾತಿಗಳನ್ನು ನ್ಯಾಕ್ ಪೋರ್ಟಲ್‌ನಲ್ಲಿ ನಿಗದಿತ ಅವಧಿಯೊಳಗೆ ಸಲ್ಲಿಸುವಂತೆ ಸೂಚಿಸಲಾಗಿದೆ. ಇದರ ಮೇಲ್ವಿಚಾರಣೆಯನ್ನು ಕಾಲೇಜಿನ ಪ್ರಾಂಶುಪಾಲರು, ಐ.ಕ್ಯೂ.ಎ.ಸಿ. ಸಂಚಾಲಕರು ಹಾಗೂ ಸಹಸಂಚಾಲಕರು ವಹಿಸಿಕೊಳ್ಳಬೇಕೆಂದು ಈ ಮೂಲಕ ತಿಳಿಸಲಾಗಿದೆ.

18.08.22

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

ನ್ಯಾಕ್ ಪ್ರಕ್ರಿಯೆಗೆ ಒಳಪಟ್ಟ/ಒಳಪಡಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಐ.ಕ್ಯೂ.ಎ.ಸಿ ಸಂಚಾಲಕರುಗಳಿಗೆ- ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳು:**

1. ನ್ಯಾಕ್ ವಿಶೇಷಾಧಿಕಾರಿಗಳು, ಪ್ರಾದೇಶಿಕ ಕಛೇರಿ, ಬೆಂಗಳೂರು/ಮೈಸೂರು/ಶಿವಮೊಗ್ಗ/ಧಾರವಾಡ/ಕಲಬುರ್ಗಿ/ಮಂಗಳೂರು – ಅಗತ್ಯ ಕ್ರಮಕ್ಕಾಗಿ.
2. ನೋಡಲ್ ಅಧಿಕಾರಿಗಳು, ರಾಜ್ಯ ಗುಣಮಟ್ಟ ಭರವಸಾ ಕೋಶ (ನ್ಯಾಕ್) ವಿಭಾಗ, ಕೇಂದ್ರ ಕಛೇರಿ – ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಕಛೇರಿ ಪ್ರತಿ